ಒ.ಎಸ್.- 07/2018
ಡಿ.ಡಬ್ಲ್ಯು - 03

ದಿನಾಂಕ 12-11-2025 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆ - ಪ್ರತಿವಾದಿಯರ ಪರ ವಕೀಲರಿಂದಃ**

ನಾನು ಸಹಿ ಮಾಡಿರುವ ಮುಖ್ಯ ವಿಚಾರಣೆಯ ಪ್ರಮಾಣ ಪತ್ರ ಸಲ್ಲಿಸಿದ್ದೇನೆ. ಅದರಲ್ಲಿರುವ ವಿಷಯಗಳು ಸರಿ ಇವೆ ಮತ್ತು ಇವು ನನ್ನ ಹೇಳಿಕೆಯ ಮೇರೆಗೆ ತಯಾರಿಸಲಾಗಿದೆ. ನಾನು ಕೆಲವು ದಾಖಲಾತಿಗಳನ್ನು ಹಾಜರುಪಡಿಸಿದ್ದು, ಅವುಗಳನ್ನು ನೋಡಿ ಗುರುತಿಸುತ್ತೇನೆ. ಸದರಿ ದಾಖಲಾತಿಗಳನ್ನು ಈ ಕೆಳಕಂಡಂತೆ ನಿಶಾನೆಗೊಳಪಡಿಸಲಾಯಿತು.

ಸಾಕ್ಷಿಗೆ ಒಂದು ದಾಖಲೆಯನ್ನು ತೋರಿಸಲಾಗಿ ಸಾಕ್ಷಿ ಅದನ್ನು ನೋಡಿ ಅದು ಮೋಹನ್ ವಿ ಪೈ ರವರು ಬರೆದ ವಿಲ್ ಎಂದು ತಿಳಿಸಿರುತ್ತಾರೆ. ಸದ್ರಿ ವಿಲ್ ಗೆ ನಾನು ಸಾಕ್ಷಿಯಾಗಿ ಸಹಿ ಮಾಡಿರುತ್ತೇನೆ . ಸಾಕ್ಷಿ ತಮ್ಮ ಸಹಿಯನ್ನು ಗುರುತಿಸಿದ ಮೇರೆಗೆ ಸದ್ರಿ ವೀಲುನಾಮೆಯನ್ನು ನಿಡಿ-14 ಎಂದು ಗುರುತಿಸಲಾಯಿತು . ಸಾಕ್ಷಿಯ ಸಹಿಯನ್ನು ನಿಡಿ 14 ಎ ಎಂದು ಗುರುತಿಸಲಾಯಿತು. ಅದನ್ನು ಸಬ್ ರಿಜಿಸ್ಟ್ರಾರ್ ಕಚೇರಿಯಲ್ಲಿ ತದನಂತರ 2019 ರಲ್ಲಿ ನೊಂದಾವಣೆ ಮಾಡಲಾಗಿರುತ್ತದೆ .

**ಈ ಹಂತದಲ್ಲಿ ಪಾಟೀ ಸವಾಲಿಗೆ ಕಾಲಾವಕಾಶ ಕೋರಿದ್ದು, ನೀಡಲಾಯಿತು.**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಸಾಕ್ಷ್ಯವನ್ನು ನನ್ನ ಉಕ್ತಲೇಖನದ ಮೂಲಕ ಬೆರಳಚ್ಚು ಮಾಡಿಸಲಾಯಿತು.)

ಓ. ಹೇ. ಕೇ. ಸ. ಇದೆ ಎಂದು ಒಪ್ಪಿದರು

ಪ್ರ.ಹಿ.ಸಿ.ನ್ಯಾ ಮತ್ತು ಸಿ.ಜೆ.ಎಂ
ಉಡುಪಿ.